# All India Radio: Bangalore
# Regiopnal Bulletin In Kannada
# 12.05.2025 / 6.40 pm
# ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

### ಮುಖ್ಯಾಂಶಗಳು

1. ರಾಷ್ಟ್ರವನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಇಂದು ರಾತ್ರಿ ೮ ಗಂಟೆಗೆ ಭಾಷಣ
2. ದೇಶದಲ್ಲಿ ಆಹಾರ ಧಾನ್ಯಗಳ ಕೃತಕ ಅಭಾವ ಸೃಷ್ಟಿಸುವವರ ವಿರುದ್ಧ ಕಠಿಣ ಕ್ರಮ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಎಚ್ಚರಿಕೆ
3. ಒಳಮೀಸಲಾತಿ ಗೊಂದಲಗಳಿಗೆ ಪರಿಶಿಷ್ಟ ಜಾತಿಗಳ ದತ್ತಾಂಶ ಸಂಗ್ರಹದಿಂದ ಪರಿಹಾರ- ಮುಖ್ಯಮಂತ್ರಿ ಸಿದ್ದರಾಮಯ್ಯ
4. ನಾಡಿನೆಲ್ಲೆಡೆ ಸಂಭ್ರಮದ ಭಗವಾನ್ ಬುದ್ಧ ಜಯಂತಿ ಆಚರಣೆ

*********

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ರಾತ್ರಿ ೮ ಗಂಟೆಗೆ ದೇಶವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ೨೫ ಭಾರತೀಯರು ಮತ್ತು ಒಬ್ಬ ನೇಪಾಳಿ ನಾಗರಿಕ ಸಾವನ್ನಪ್ಪಿದ ನಂತರ ಭಾರತ, ಪಾಕಿಸ್ತಾನದಲ್ಲಿರುವ ಭಯೋತ್ಪಾದಕರ ನೆಲೆಗಳ ವಿರುದ್ಧ ನಡೆಸಿದ ಆಪರೇಷನ್ 'ಸಿಂಧೂರ' ಕಾರ್ಯಾಚರಣೆ ನಂತರ ಪ್ರಧಾನಿ ದೇಶ ಉದ್ದೇಶಿಸಿ ಮಾತನಾಡಲಿದ್ದಾರೆ. ಪಾಕಿಸ್ತಾನ ಹಾಗೂ ಪಾಕ್ ಅಕ್ರಮಿತ ಕಾಶ್ಮೀರ, ವಿವಿಧ ಕಡೆ ನಡೆಸದ ಕಾರ್ಯಾಚರಣೆಯಲ್ಲಿ ಹಲವು ಭಯೋತ್ಪಾದಕರ ನೆಲೆಗಳನ್ನು ಭಾರತ ನಾಶಗೊಳಿಸಿತ್ತು. ಪ್ರಧಾನಿ ನರೇಂದ್ರ ಮೋದಿ ಇಂದು ಅಪರಾಹ್ನ ನವದೆಹಲಿಯ ತಮ್ಮ ನಿವಾಸದಲ್ಲಿ ಉನ್ನತಮಟ್ಟದ ಸಭೆ ನಡೆಸಿದರು. ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ರಕ್ಷಣಾ ಸಿಬ್ಬಂದಿಯ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಸೇನೆಯ ಮೂರು ವಿಭಾಗಗಳ ಮುಖ್ಯಸ್ಥರು ಹಾಗೂ ಹಲವು ಹಿರಿಯ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

*********

ದೇಶದಲ್ಲಿ ಅಕ್ಕಿ, ಗೋಧಿ ಸೇರಿದಂತೆ ಆಹಾರ ಧಾನ್ಯಗಳು ಮುಂದಿನ ಒಂದೂವರೆ ವರ್ಷಕ್ಕೆ ಆಗುವಷ್ಟು ಸಂಗ್ರಹವಿದೆ. ಅಕ್ರಮವಾಗಿ ಆಹಾರ ಧಾನ್ಯಗಳನ್ನು ಸಂಗ್ರಹಿಸಿ, ಸಾಗಾಣಿಕೆ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ರಾಜ್ಯ ಸರ್ಕಾರಗಳಿಗೆ ಸೂಚನೆ ನೀಡಲಾಗಿದೆ ಎಂದು ಕೇಂದ್ರ ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ಕೆಲವೆಡೆ ಕೃತಕ ಅಭಾವ ಸೃಷ್ಟಿಸಿ ಆಹಾರ ಧಾನ್ಯಗಳ ದರ ಏರಿಕೆ ಪರಿಸ್ಥಿತಿ ಉಂಟು ಮಾಡಲಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.ಈಗಾಗಲೇ ಈ ಸಂಬಂಧ ನಮ್ಮ ಇಲಾಖೆಯಿಂದ ಅಧಿಸೂಚನೆ ಹೊರಡಿಸಲಾಗಿದೆ. ಸಾರ್ವಜನಿಕರು ಯಾವುದೇ ಭಯಪಡುವ ಅಗತ್ಯವಿಲ್ಲ. ಸರ್ಕಾರದ ಗೋದಾಮುಗಳಲ್ಲಿ ದೊಡ್ಡ ಪ್ರಮಾಣದಲ್ಲಿ ಆಹಾರ ಧಾನ್ಯಗಳ ಸಂಗ್ರಹವಿದೆ ಎಂದು ಸ್ಪಷ್ಟಪಡಿಸಿದರು.

*********

ಪರಿಶಿಷ್ಟ ಜಾತಿಯ ಒಳಮೀಸಲಾತಿ ಕುರಿತಾದ ಗೊಂದಲ ನಿವಾರಿಸಲು ರಾಜ್ಯ ಸರ್ಕಾರ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದ ಸಮಿತಿ ರಚಿಸಲಾಗಿದ್ದು, ಸಮಿತಿಯ ಶಿಫಾರಿಸ್ಸಿನಂತೆ ಈಗಾಗಲೇ ದತ್ತಾಂಶ ಸಂಗ್ರಹಕ್ಕೆ ಸಮೀಕ್ಷೆ ನಡೆಯುತ್ತಿದೆ. ಮೂರು ಹಂತಗಳ ಈ ಸಮೀಕ್ಷೆ ಒಳಮೀಸಲಾತಿಯ ಎಲ್ಲ ಗೊಂದಲ, ಗೋಜುಲುಗಳನ್ನು ನಿವಾರಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮೈಸೂರು ಜಿಲ್ಲೆ ಎಚ್.ಡಿ.ಕೋಟೆಯಲ್ಲಿಂದು ಆಯೋಜಿಸಿದ್ದ ಅಂಬೇಡ್ಕರ್ ಜಯಂತಿ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ರಾಜ್ಯ ಸರ್ಕಾರ ಬುದ್ಧ, ಬಸವ, ಅಂಬೇಡ್ಕರ್, ಗಾಂಧಿ ಹಾಗೂ ಸಂವಿಧಾನದ ಆಶಯಗಳಡಿಯಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಜಾತಿ-ಧರ್ಮದ ಸಹಿಷ್ಣತೆ ಇರುವ ಸರ್ವರನ್ನು ಒಳಗೊಳ್ಳುವ ಪರಂಪರೆ ನಮ್ಮದು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಸಂಸದ ಸುನೀಲ್ ಬೋಸ್, ಶಾಸಕರುಗಳಾದ ಅನಿಲ್ ಚಿಕ್ಕಮಾದು, ಡಿ.ರವಿಶಂಕರ್, ಗಣೇಶ್ ಪ್ರಸಾದ್, ಮೇಲ್ಮನೆ ಸದಸ್ಯ ಡಾ.ಡಿ. ತಿಮ್ಮಯ್ಯ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

*********

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಹುಬ್ಬಳ್ಳಿಯ ಬಿವಿಬಿ ಇಂಜಿನಿಯರಿಂಗ್ ಕಾಲೇಜು ಸಭಾಂಗಣದಲ್ಲಿ ಆಯೋಜಿಸಿದ್ದ ಸಂವಿಧಾನ ಕುರಿತ ಕೃತಿ ಬಿಡುಗಡೆ ಸಮಾರಂಭದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಹನ್ನೊಂದು ಪ್ರಮುಖ ಲೇಖಕರಿಂದ ರಚಿಸಲಾಗಿರುವ ಈ ಕೃತಿ, ನಮ್ಮ ಶ್ರೇಷ್ಠ ಸಂವಿಧಾನವನ್ನು ಬಲಪಡಿಸುವ ಮಹತ್ಕಾರ್ಯವನ್ನು ಜನರೆದುರು ತೆರೆದಿಡುವ ಪ್ರಯತ್ನ ಮಾಡಿದೆ ಎಂದರು. ಕೇಂದ್ರ ಸರ್ಕಾರ ಮೀಸಲಾತಿ ವಿಚಾರವಾಗಿ ಅತ್ಯಂತ ಗಂಭೀರವಾಗಿದೆ. ಮೀಸಲಾತಿಗೆ ದಕ್ಕೆ ತರುವ ಯಾವುದೇ ಕೆಲಸ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು. ಚಿತ್ರದುರ್ಗದ ಡಾ.ಬಸವಮೂರ್ತಿ ಮಾದರಾ ಚನ್ನಯ್ಯ ಸ್ವಾಮಿಜಿ, ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಪತಿ ಪ್ರೋಫೆಸರ್ ಡಾ.ಸಿ.ಬಸವರಾಜ, ಎಬಿವಿಪಿ ರಾಷ್ಟ್ರೀಯ ಕಾರ್ಯದರ್ಶಿ ಶ್ರವಣ್ ಬಿ ರಾಜ್, ಎಬಿವಿಪಿ ರಾಜ್ಯಾಧ್ಯಕ್ಷ ಡಾ.ಆನಂದ ಹೊಸೂರ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

*********

ಚಿತ್ರದುರ್ಗ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ ನಿರ್ಮಾಣವನ್ನು ಆರು ತಿಂಗಳೊಳಗೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಹೇಳಿದ್ದಾರೆ. ಕಟ್ಟಡ ನಿರ್ಮಾಣ ಸ್ಥಳಕ್ಕೆ ಇಂದು ಭೇಟಿ ನೀಡಿ ಪರಿಶೀಲಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ೨೫ ಕೋಟಿ ರೂಪಾಯಿ ವೆಚ್ಚದಲ್ಲಿ ಕಟ್ಟಡ ನಿರ್ಮಾಣಕ್ಕೆ ಈ ಹಿಂದೆ ಯೋಜನೆ ರೂಪಿಸಲಾಗಿತ್ತು. ಆದರೆ ಕಟ್ಟಡಕ್ಕೆ ಈಗಾಗಲೇ ೪೭ ಕೋಟಿ ರೂಪಾಯಿ ವೆಚ್ಚವಾಗಿದ್ದು, ಇನ್ನೂ ೧೫ ಕೋಟಿ ರೂಪಾಯಿ ಹೆಚ್ಚುವರಿ ಅನುದಾನ ಬೇಡಿಕೆಯ ಪರಿಸ್ಥಿತಿ ಇದೆ. ಜಿಲ್ಲಾ ಉಸ್ತುವಾರಿ ಸಚಿವರ ಮನವಿಗೆ ಅನುಗುಣವಾಗಿ ಕಟ್ಟಡ ಕಾಮಗಾರಿ ಶೀಘ್ರ ಪೂರ್ಣಗೊಳಿಸಲು ಬದ್ಧ ಎಂದು ಸಚಿವರು ತಿಳಿಸಿದರು.

ನಂತರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಮುಂಬರುವ ಜೂನ್ ೩೦ ರೊಳಗಾಗಿ ಚಿತ್ರದುರ್ಗ ಜಿಲ್ಲೆಯಲ್ಲಿ ಬಾಕಿ ಇರುವ ಕಂದಾಯ ಗ್ರಾಮಗಳ ರಚನೆಗೆ ಸಂಬಂಧಿಸಿದಂತೆ ಅಂತಿಮ ಅಧಿಸೂಚನೆ ಹೊರಡಿಸಬೇಕು ಎಂದು ಸಚಿವ ಕೃಷ್ಣಭೈರೇಗೌಡ ಜಿಲ್ಲಾಧಿಕರಿಗೆ ಸೂಚಿಸಿದರು. ಕಳೆದ ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಹಟ್ಟಿ, ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಕಾರ್ಯ ತ್ವರಿತಗತಿಯಲ್ಲಿ ನಡೆಯಬೇಕು ಎಂದು ಹೇಳಿದರು. ಕಂದಾಯ ಗ್ರಾಮಗಳ ರಚನೆಗೆ ಜಿಲ್ಲೆಯಲ್ಲಿ ಒಟ್ಟು ೩೧೬ ಗ್ರಾಮಗಳ ಗುರುತಿಸಲಾಗಿದ್ದು, ಈಗಾಗಲೇ ೨೯೬ ಪ್ರಾಥಮಿಕ ಸೂಚನೆ ಹಾಗೂ ೨೦೬ ಅಂತಿಮ ಅಧಿಸೂಚನೆಯಾಗಿದೆ. ಇನ್ನೂ ೯೧ ಗ್ರಾಮಗಳು ಅಂತಿಮ ಅಧಿಸೂಚನೆಗೆ ಬಾಕಿ ಇದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಈ ಸಂದರ್ಭದಲ್ಲಿ ಮಾಹಿತಿ ನೀಡಿದರು.

*********

ರಾಜ್ಯದ್ಯಾಂತ ಒಂದು ಅಥವಾ ಎರಡು ಸ್ಥಳಗಳಲ್ಲಿ ಮಳೆಯಾಗಿದೆ. ಅತಿ ಹೆಚ್ಚು ಉಷ್ಣಾಂಶ ೪೦.೨ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ಜಿಲ್ಲೆಯಲ್ಲಿ ದಾಖಲಾಗಿದೆ.ರಾಜ್ಯಾದ್ಯಂತ ಹಲವು ಕಡೆಗಳಲ್ಲಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

*********

ವಿಶ್ವಕ್ಕೆ ಶಾಂತಿ ಹಾಗೂ ಅಹಿಂಸೆಯ ಮಹತ್ವವನ್ನು ಬೋಧಿಸಿದ ಭಗವಾನ್ ಬುದ್ಧರ ಜಯಂತಿಯನ್ನು ನಾಡಿನಾದ್ಯಂತ ಇಂದು ಸಂಭ್ರಮದಿಂದ ಆಚರಿಸಲಾಯಿತು.ಗದಗ ನಗರದ ಜಿಲ್ಲಾಡಳಿತ ಭವನದ ಸಭಾಭವನದಲ್ಲಿ ನಡೆದ ಭಗವಾನ್ ಬುದ್ಧರ ಜಯಂತಿ ಸಮಾರಂಭದಲ್ಲಿ ಬುದ್ಧರ ಮೂರ್ತಿಗೆ ಜಿಲ್ಲಾ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಪುಷ್ಪ ನಮನ ಸಲ್ಲಿಸಿ, ಮಾತನಾಡಿ, ಜಗತ್ತಿಗೆ ಶಾಂತಿ ಸಂದೇಶ ಸಾರಿದ ಮಹಾನ್ ಸಂತ ಭಗವಾನ್ ಬುದ್ಧ ಅವರ ಜೀವನ ಆದರ್ಶಗಳು ಮತ್ತು ವಿಚಾರಗಳನ್ನು ನಾವೆಲ್ಲರೂ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕೆಂದು ಎಂದು ತಿಳಿಸಿದರು.
ಹಾಸನ ಜಿಲ್ಲಾಡಳಿತ ಆಯೋಜಿಸಿದ್ದ ಬುದ್ಧ ಜಯಂತಿ ಕಾರ್ಯಕ್ರಮಕ್ಕೆ ಧಮ್ಮಬೋಧಿ ಮತ್ತು ಬಿಕ್ಕು ಸಂಘದ ಪೂಜ್ಯ ಬಿಕ್ಕು ಚಾಲನೆ ನೀಡಿದರು. ನಂತರ ಅವರು, ಜಗತ್ತಿನಲ್ಲಿ ಆಶಾಂತಿಯುತ ವಾತಾವರಣ ಸೃಷ್ಟಿಯಾಗಿರುವ ಪ್ರಸ್ತುತ ಸಂದರ್ಭದಲ್ಲಿ ಬುದ್ಧರ ಶಾಂತಿಯ ಸಂದೇಶಗಳಲ್ಲಿ ಪರಿಹಾರವಿದೆ ಎಂಬುದನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕಿದೆ ಎಂದು ನುಡಿದರು.ಯಾದಗಿರಿಯಲ್ಲಿ ನಡೆದ ಭಗವಾನ್ ಬುದ್ಧ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಮಾತನಾಡಿ ದ್ವೇಷದ ಹಾದಿಯಲ್ಲಿ ನಡೆಯುವ ಮೂಲಕ ಮಾನವ ಇಂದು ಅಶಾಂತಿಯ ಸಾಗರದಲ್ಲಿ ಮುಳುಗಿದ್ದಾನೆ. ಬುದ್ಧನ ಶಾಂತಿ ಸಂದೇಶಗಳಲ್ಲಿ ಎಲ್ಲಾ ಸಮಸ್ಯೆಗಳಿಗೆ ಪರಿಹಾರವಿದೆ ಎಂದು ಹೇಳಿದರು.ವಿಜಯನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಬುದ್ಧನ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಎಂ. ಎಸ್. ದಿವಾಕರ್ ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬಹುತೇಕರ ಮನೆಗಳಲ್ಲಿ ಬುದ್ಧನ ಪ್ರತಿಮೆಗಳ ಹೊರತಾಗಿ ಶಾಂತಿ ನೆಲೆಸಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.ಚಿಕ್ಕಮಗಳೂರು ನಗರದ ಕುವೆಂಪು ಕಲಾ ಮಂದಿರದಲ್ಲಿ ಜಿಲಾಡಳಿತ ಹಮ್ಮಿಕೊಂಡಿದ್ದ ಬುದ್ಧ ಜಯಂತಿ ಕಾರ್ಯಕ್ರಮವನ್ನು ಶಾಸಕ ಹೆಚ್.ಡಿ.ತಮ್ಮಯ್ಯ ಉದ್ಘಾಟಿಸಿದ್ದರು. ವಿಧಾನಪರಿಷತ್ ಸದಸ್ಯ ಸಿ.ಟಿ ರವಿ, ಜಿಲ್ಲಾಧಿಕಾರಿ ಮೀನಾ ನಾಗರಾಜ್, ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ಮತ್ತಿತರರು ಪಾಲ್ಗೊಂಡಿದ್ದರು.

*********

ಆಪರೇಷನ್ ಸಿಂಧೂರ್ ಕಾರ್ಯಾಚರಣೆ ನಂತರದ ಬೆಳವಣಿಗೆಗಳ ಕುರಿತು ನವದೆಹಲಿಯಲ್ಲಿಂದು ಸೇನಾಪಡೆಗಳ ಜಂಟಿ ಸುದ್ದಿಗೋಷ್ಠಿ ನಡೆಯಿತು. ಭಾರತೀಯ ಸೇನಾ ಕಾರ್ಯಾಚರಣೆಗಳ ಮಹಾನಿರ್ದೇಶಕ ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್, ಏರ್ ಮಾರ್ಷಲ್ ಎ.ಕೆ.ಭಾರ್ತಿ, ವೈಸ್ ಅಡ್ಮಿರಲ್ ಎ.ಎನ್.ಪ್ರಮೋದ್, ಮೇಜರ್ ಜನರಲ್ ಸಂದೀಪ್.ಎಸ್.ಶಾರ್ದ ಉಪಸ್ಥಿತರಿದ್ದರು. ಏರ್ ಮಾರ್ಷಲ್ ಎ.ಕೆ.ಭಾರ್ತಿ, ಭಾರತದ ಎಲ್ಲಾ ವಾಯುನೆಲೆಗಳು ಸೇರಿದಂತೆ ಸೇನಾಪಡೆ ಎಂತಹುದೇ ಸವಾಲುಗಳನ್ನು ಎದುರಿಸಲು ಸನ್ನದ್ಧವಾಗಿದೆ. ಅಗತ್ಯ ಬಿದ್ದಲ್ಲಿ ಮುಂದಿನ ಕಾರ್ಯಾಚರಣೆಗಳಿಗೆ ಸೇನಾಪಡೆಗಳು ಸಿದ್ಧವಾಗಿವೆ. ಗಡಿ ಭಾಗದಲ್ಲಿ ಮೂರೂ ಸೇನೆಗಳು ಕಾರ್ಯಾಚರಣೆಗೆ ಸನ್ನದ್ಧ ಸ್ಥಿತಿಯಲ್ಲಿವೆ ಎಂದು ತಿಳಿಸಿದರು. ಸೇನಾ ಕಾರ್ಯಾಚರಣೆಗಳ ಮಹಾನಿರ್ದೇಶಕ ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್, ಚೈನಾ ನಿರ್ಮಿತ ಕ್ಷಿಪಣಿಗಳನ್ನು ಪಾಕಿಸ್ತಾನ ಪ್ರಯೋಗಿಸಿತ್ತು. ಅವುಗಳನ್ನು ಹೊಡೆದುರಳಿಸಲಾಗಿದೆ. ಡ್ರೋಣ್, ಯುದ್ಧವಿಮಾನಗಳ ದಾಳಿ ನಿಗ್ರಹಿಸಲಾಗಿದೆ. ಪಾಕಿಸ್ತಾನ ಮೇ ೯ ಮತ್ತು ೧೦ರ ರಾತ್ರಿ ನಿರಂತರ ದಾಳಿಗೆ ವಿಫಲ ಯತ್ನ ನಡೆಸಿತ್ತು. ನಮ್ಮ ವಾಯುರಕ್ಷಣಾ ವ್ಯವಸ್ಥೆ ವಿನಾಶಕಾರಿ ದಾಳಿಗಳನ್ನು ಸಮರ್ಥವಾಗಿ ನಿಗ್ರಹಿಸಿತು. ಚೈನಾ ನಿರ್ಮಿತ ಪಿ ಎಲ್ -೧೫ ಕ್ಷಿಪಣಿಯನ್ನು ಹೊಡೆದುರಳಿಸಲಾಗಿದ್ದು ಚೈನಾ ಮೂಲದ ಏರ್ ಡಿಫೆನ್ಸ್ ಸಿಸ್ಟಂ ಅನ್ನು ನಾಶಗೊಳಿಸಲಾಗಿದೆ ಎಂದರು.

*********

**೧೨.೦೫.೨೦೨೫ ಪ್ರದೇಶ ಸಮಾಚಾರ ೬.೪೦ ಸಂಕ್ಷಿಪ್ತ ಸುದ್ದಿಗಳು**

೧. ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ತಾಲ್ಲೂಕಿನ ಸುಪ್ರಸಿದ್ಧ ಗಡಿದಂ ವೆಂಕಟರಮಣಸ್ವಾಮಿ ಜಾತ್ರಾ ಮತ್ತು ಬ್ರಹ್ಮ ರಥೋತ್ಸವ ಇಂದು ವಿಜೃಂಭಣೆಯಿಂದ ಜರುಗಿತು. ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ರಥೋತ್ಸವಕ್ಕೆ ಚಾಲನೆ ನೀಡಿದರು.
೨. ಜಗಜ್ಯೋತಿ ಬಸವಣ್ಣನವರು ೧೨ ನೇ ಶತಮಾನದಲ್ಲಿ ಸಮಾಜದಲ್ಲಿನ ಅಸಮಾನತೆ, ಅಸ್ಪೃಶ್ಯತೆ ಮತ್ತು ಲಿಂಗ ತಾರತಮ್ಯಗಳ ವಿರುದ್ಧ ಕ್ರಾಂತಿಕಾರಿ ಹೆಜ್ಜೆಯನ್ನಿಟ್ಟು ಮಾನವ ಕುಲ ಒಂದೇ ಎಂಬ ಮಹತ್ವದ ಸಂದೇಶವನ್ನು ಸಾರಿದರು ಎಂದು ಗೌರಿಬಿದನೂರು ಶಾಸಕ ಕೆ.ಹೆಚ್.ಪುಟ್ಟಸ್ವಾಮಿಗೌಡ ಚಿಕ್ಕಬಳ್ಳಾಪುರದಲ್ಲಿ ಹೇಳಿದ್ದಾರೆ.
೩. ಹಾವೇರಿ ಜಿಲ್ಲೆಯಲ್ಲಿ ಮಹಿಳಾ ಕೂಲಿಕಾರರ ಭಾಗವಹಿಸುವಿಕೆ ಹೆಚ್ಚಿಸುವ ನಿಟ್ಟಿನಲ್ಲಿ 'ದುಡಿಯೋಣ ಬಾ, ನರೇಗಾ' ಮತ್ತು 'ಸ್ತ್ರೀ ಚೇತನ' ಮೊದಲಾದ ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ರುಚಿ ಬಿಂದಲ್ ತಿಳಿಸಿದ್ದಾರೆ.

****END*****